## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.105/2024

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಸುರೇಶ್ ನಾಯ್ಕು | CW: 1 | PW: 1 |
| ತಂದೆಯ ಹೆಸರು | : | ದರ್ಗ್ಯಾನಾಯ್ಕು | | |
| ವಯಸ್ಸು | : | 45 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಹೊಸಜೋಗ | | |

ದಿನಾಂಕಃ 19.04.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಆರೋಪಿ ಗೊತ್ತು. ಚಾಸಾ 2 ನನ್ನ ಹೆಂಡತಿ . ಚಾಸಾ 3 ನನ್ನ ತಂದೆ. ಚಾಸಾ 4 ಮತ್ತು 5 ನಮ್ಮ ಪಕ್ಕದ ಮನೆಯವರು. ದಿಃ 23.05.2023 ರಂದು ಬೆಳಗ್ಗೆ 9.30 ಗಂಟೆ ಸಮಯದಲ್ಲಿ ಸೈಟಿನ ವಿಚಾರವಾಗಿ ಗಿರೀಶ್ ನಾಯ್ಕು ನನ್ನ ತಂದೆ ಚಾಸಾ 3 ರವರಿಗೆ ಹೊಡೆದನು. ಆ ಸಮಯದಲ್ಲಿ ನಾನು ಹೊಲದಿಂದ ಜಾಗದ ಹತ್ತಿರ ಬಂದಾಗ ನನಗೆ ಆರೋಪಿಯು ಕಲ್ಲಿನಲ್ಲಿ ಹೊಡೆದ. ನಾನು ನ್ಯಾಮತಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ಆರೋಪಿ ನನಗೆ ಕಲ್ಲಿನಿಂದ ಹೊಡೆದಿದ್ದು ಸದರಿ ಕಲ್ಲನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಒಂದು ಕಲ್ಲನ್ನು ನೋಡಿ ಗುರುತಿಸಿದ್ದು ಕಲ್ಲನ್ನು ಮು.ಮಾ 1 ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–</u>

ನನ್ನ ಮತ್ತು ಚಾಸಾ 3 ರವರ ಮೇಲೆ ಹಲ್ಲೆ ಮಾಡಿದ ವ್ಯಕ್ತಿ ನ್ಯಾಯಾಲಯದಲ್ಲಿ ಇದ್ದಾರೆ ಎಂದರೆ ಸರಿ. ದಿಃ 23.05.2023 ರಂದು ಬೆಳಗ್ಗೆ 9.30 ರ ಸಮಯದಲ್ಲಿ ನನ್ನ ತಂದೆ ಚಾಸಾ 3 ರವರು ನಮ್ಮ ಮನೆಯ ಹಿತ್ತಲಿನಲ್ಲಿ ನಿಂತುಕೊಂಡು ಬೇಲಿ ಹಾಕಿಸುತ್ತಿದ್ದರು. ಆಗ ಆರೋಪಿ ಬಂದು ನನ್ನ ತಂದೆಯ ಮೇಲೆ ಗಲಾಟೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದು, ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ. ಆರೋಪಿ ನನ್ನ ತಂದೆಗೆ ಕೈಕಾಲುಗಳಿಂದ ಮೈಕೈಗೆ ಹೊಡೆದಿರುತ್ತಾನೆ ಎಂದರೆ ಸರಿ. ಆರೋಪಿ ಕಲ್ಲಿನಿಂದ ಚಾಸಾ 3 ರವರ ತಲೆಗೆ ಹೊಡೆದನು ಎಂದರೆ ಸರಿ. ಜಗಳ ಬಿಡಿಸಲು ಹೋದ ನಾನು ಮತ್ತು ಚಾಸಾ 2 ರವರಿಗೂ ಕೂಡ ಆರೋಪಿಯು ಅವಾಚ್ಯ ಶಬ್ದಗಳಿಂದ ಬೈದು ಕೊಲೆ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿ. ಆರೋಪಿಯು ಮು.ಮಾ 1 ರಿಂದ ನನ್ನ ಬಾಯಿಗೆ ಹೊಡೆದಾಗ ತುಟಿಯು ಹೊಡೆದು 4 ಹಲ್ಲುಗಳಿಗೆ ನೋವಾಗಿರುತ್ತದೆ ಎಂದರೆ ಸರಿ. ಆರೋಪಿಯು ಚಾಸಾ 2 ರವರ ಬಟ್ಟೆ ಹಿಡಿದು ಎಳೆದಾಡಿ ಅವಮಾನಪಡಿಸಿರುತ್ತಾನೆ ಎಂದರೆ ಸರಿ. ಚಾಸಾ 4 ಮತ್ತು 5 ರವರು ಜಗಳ ಬಿಡಿಸಿರುತ್ತಾರೆ ಎಂದರೆ ಸರಿ. ಹಲ್ಲೆಯಿಂದ ಚಾಸಾ 3 ರವರು ಸಹ ನ್ಯಾಮತಿ ಸರ್ಕಾರಿ ಆಸ್ಪತ್ರೆಯಲ್ಲಿ ಹಾಗೂ ಶಿವಮೊಗ್ಗದ ಆಸ್ಪತ್ರೆಯಲ್ಲೂ ಸಹ ಚಿಕಿತ್ಸೆ ಪಡೆದುಕೊಂಡಿರುತ್ತಾರೆ ಎಂದರೆ ಸರಿ. ಗಲಾಟೆ ನಡೆದ ದಿನ ನಾನು ಆರೋಪಿಯ ವಿರುದ್ಧ ನ್ಯಾಮತಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿರುತ್ತೇನೆ ಎಂದರೆ ಸರಿ ಹಾಗೂ ಪೊಲೀಸರಿಗೆ ಮರುಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿ. ಸಾಕ್ಷಿಯು ದೂರನ್ನು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ದೂರನ್ನು ನಿಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ 1 ನೈಟಿಯನ್ನು ನೋಡಿ ಗುರುತಿಸಿದ್ದು ಅದನ್ನು ಮು.ಮಾ 2 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ– ಆರೋಪಿ ಪರ ಶ್ರೀ.ಎಂ ಆರ್ ಎಂ ವಕೀಲರಿಂದಃ–</u>

ಗಲಾಟೆ ಸಮಯದಲ್ಲಿ ನಾನು ಇರಲಿಲ್ಲ ಎಂದರೆ ಸರಿ. ಆರೋಪಿಯು ಮು.ಮಾ 1 ರಿಂದ ಹಲ್ಲೆ ಮಾಡಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ಘಟನಾ ಸ್ಥಳದ ಚೆಕ್ಕುಬಂಧಿ ಹೇಳಿ ಎಂದರೆ ಈಗ ನೆನಪಿಲ್ಲ. ಹಲ್ಲೆಯ ಹಿನ್ನೆಲೆಯಲ್ಲಿ ನ್ಯಾಮತಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ಮು.ಮಾ 1 ರೀತಿಯ ಕಲ್ಲು

ಸಾಮಾನ್ಯವಾಗಿ ಎಲ್ಲಾ ಕಡೆ ಸಿಗುತ್ತದೆ ಎಂದರೆ ಸರಿ. ಘಟನಾ ಸ್ಥಳದಲ್ಲಿ ಘಟನಾ ಸಮಯದಲ್ಲಿ ಚಾಸಾ 2 ರವರು ಇರಲಿಲ್ಲ ಎಂದರೆ ಸರಿಯಲ್ಲ. ಚಾಸಾ 3 ರವರು ಹಲ್ಲೆಯ ಹಿನ್ನೆಲೆಯಲ್ಲಿ ನ್ಯಾಮತಿ ಸರ್ಕಾರಿ ಆಸ್ಪತ್ರೆಯಲ್ಲಾಗಲೀ, ಶಿವಮೊಗ್ಗದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿ ವಿರುದ್ಧ ಸುಳ್ಳು ದೂರು ನೀಡಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ. ನಾನು ಪೊಲೀಸರಿಗೆ ಯಾವುದೇ ಮರುಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.